# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **424**

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೆ. ಅಬ್ದುಲ್ ಜಬ್ಬರ್

(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸಬೇಕಾದ ದಿನಾಂಕ : 19.02.2024

ಉತ್ತರಿಸುವ ಸಚಿವರು : ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖೆ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಒಟ್ಟು ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳು ಚಾಲ್ತಿಯಲ್ಲಿವೆ: (ಸಂಪೂರ್ಣ ಮಾಹಿತಿ ನೀಡುವುದು) | ರಾಜ್ಯದಲ್ಲಿ ಪ್ರಸ್ತುತ ಚಾಲ್ತಿಯಲ್ಲಿರುವ ಪಡಿತರ ಚೀಟಿಗಳ ವಿವರ ಈ ಕೆಳಕಂಡಂತಿದೆ. |

| ಪಡಿತರ ಚೀಟಿ | ಪಡಿತರ ಚೀಟಿ ಸಂಖ್ಯೆ | ಫಲಾನುಭವಿಗಳ ಸಂಖ್ಯೆ |
|---|---|---|
| ಅಂತ್ಯೋದಯ ಅನ್ನ ಯೋಜನಾ | 10,84,694 | 44,02,005 |
| ಆದ್ಯತಾ ಪಡಿತರ ಚೀಟಿ | 1,16,66,233 | 3,94,18,190 |
| ಆದ್ಯತೇತರ ಪಡಿತರ ಚೀಟಿ | 25,00,665 | 85,78,342 |
| ಒಟ್ಟು | 1,52,51,592 | 5,23,98,537 |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಆ | ರಾಜ್ಯದ ಗ್ರಾಹಕರಿಗೆ ಹೊಸದಾಗಿ ಎಷ್ಟು ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳನ್ನು ನೀಡುವ ಗುರಿ ಸರ್ಕಾರದ ಮುಂದಿದೆ; | ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ ಅರ್ಜಿಗಳ ಬಾಕಿ ಇರುವ 2,95,986 ಅರ್ಜಿಗಳ ವಿಲೇವಾರಿ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರನ್ವಯ ಆದೇಶಿಸಲಾಗಿರುತ್ತದೆ. ಸರ್ಕಾರದ ಆದೇಶದಂತೆ ಬಾಕಿ ಇರುವ ಹೊಸ ಆದ್ಯತಾ ಪಡಿತರ ಚೀಟಿಗಳನ್ನು ವಿಲೇವಾರಿ ಮಾಡಲು ರಾಜ್ಯದ ಎಲ್ಲಾ ಜಂಟಿ/ ಉಪ ನಿರ್ದೇಶಕರಿಗೆ ನಿರ್ದೇಶನ ನೀಡಲಾಗಿರುತ್ತದೆ. ಹೊಸ ಆದ್ಯತಾ ಪಡಿತರ ಚೀಟಿಗಳ ವಿಲೇವಾರಿ ಕಾರ್ಯ ಪ್ರಗತಿಯಲ್ಲಿರುತ್ತದೆ. ಈವರೆಗೆ 57,561 ಹಾಗೂ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಈವರೆಗೆ 744 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. |

| | | |
|---|---|---|
| ಇ | ನಾಗರೀಕ ಸರಬರಾಜು ಹೊರತು ಪಡಿಸಿ ಬೇರೆ-ಬೇರೆ ಯಾವ ಸಂಸ್ಥೆಗಳಿಗೆ ಆಹಾರ ಸರಬರಾಜು ಮಾಡಲಾಗುತ್ತಿದೆ: | 2017-18ನೇ ಸಾಲಿನಿಂದ "ದಾಸೋಹ" ಯೋಜನೆ ಅನುಷ್ಠಾನಗೊಳಿಸಿ ರಾಜ್ಯದ ಅರ್ಹ ಕಲ್ಯಾಣ ಸಂಸ್ಥೆಗಳಿಗೆ ಉಚಿತ ಆಹಾರ ಧಾನ್ಯ ವಿತರಣೆ ಮಾಡಲಾಗುತ್ತಿದೆ. ಜನವರಿ 2024 ರ ಮಾಹೆಯಲ್ಲಿದ್ದಂತೆ 275 ರಾಜ್ಯ ಸರ್ಕಾರದ ಸಂಸ್ಥೆಗಳು (GOK) ಮತ್ತು 165 ಕೇಂದ್ರ ಸರ್ಕಾರದ ಸಂಸ್ಥೆಗಳು (GOI) ಸೇರಿ ಒಟ್ಟು 440 ಸಂಸ್ಥೆಗಳಿಗೆ ಆಹಾರಧಾನ್ಯದ ಹಂಚಿಕೆ ನೀಡಲಾಗುತ್ತಿದೆ. ಸಂಸ್ಥೆವಾರು ವಿವರ ಅನುಬಂಧದಲ್ಲಿ ಒದಗಿಸಲಾಗಿದೆ.<br>ಕೇಂದ್ರ ಸರ್ಕಾರದಿಂದ "ಕಲ್ಯಾಣ ಸಂಸ್ಥೆಗಳು ಮತ್ತು ಹಾಸ್ಟೇಲ್ಸ್ ಯೋಜನೆಯಡಿ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಪರಿಶಿಷ್ಟ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ಹಾಗೂ ಕ್ರೈಸ್ ವ್ಯಾಪ್ತಿಯ 6,616 ಹಾಸ್ಟೇಲ್ಸ್‌ಗಳ 7,15,116 ನಿವಾಸಿಗಳಿಗೆ ಆಹಾರಧಾನ್ಯ ಹಂಚಿಕೆ ನೀಡಲಾಗುತ್ತಿದೆ. |
| ಈ | ಕಳೆದ 2-3 ವರ್ಷಗಳಿಂದ ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್ ವಿತರಣೆಯನ್ನು ನಿಲ್ಲಿಸಲಾಗಿದೆಯೇ; (ಮಾಹಿತಿ ನೀಡುವುದು) | ಹೊಸ ಆದ್ಯತಾ ಮತ್ತು ಆದ್ಯತೇತರ ಪಡಿತರ ಚೀಟಿಗಳ ವಿತರಣೆ ಕಾರ್ಯ ನಿಲ್ಲಿಸಿರುವುದಿಲ್ಲ. ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021 ದಿನಾಂಕ: 03.12.2021 ಮತ್ತು 28.11.2022 ರನ್ವಯ 2,76,459 ಹಾಗೂ 1,55,927 ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಸಲ್ಲಿಸಿರುವ 2,76,459 ಹಾಗೂ 1,55,927 ಅರ್ಹ ಅರ್ಜಿಗಳನ್ನು ಸರ್ಕಾರದ ಆದೇಶದಂತೆ ವಿಲೇವಾರಿ ಮಾಡಲಾಗಿರುತ್ತದೆ. ಮುಂದುವರೆದು ಹೊಸ ಆದ್ಯತಾ ಪಡಿತರ ಚೀಟಿಯನ್ನು ಕೋರಿ ಮಾರ್ಚ್ 2023 ರ ವರೆಗೆ ಸಲ್ಲಿಸಲಾಗಿದ್ದ 2,95,986 ಅರ್ಜಿಗಳ ವಿಲೇವಾರಿ ಗೊಳಿಸಲು ಸರ್ಕಾರದ ಆದೇಶ ಸಂಖ್ಯೆ: ಆನಾಸ 211 ಡಿಆರ್‌ಎ 2021, ದಿನಾಂಕ: 29.09.2023 ರಲ್ಲಿ ಆದೇಶಿಸಲಾಗಿರುತ್ತದೆ. ಈವರೆಗೆ 57,561 ಹಾಗೂ ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಈವರೆಗೆ 744 ಅರ್ಜಿಗಳಿಗೆ ಅನುಮೋದನೆ ನೀಡಲಾಗಿರುತ್ತದೆ. |
| ಉ | ಎ.ಪಿ.ಎಲ್ ಮತ್ತು ಬಿ.ಪಿ.ಎಲ್ ಕಾರ್ಡ್‌ಗಳನ್ನು ವಿತರಿಸಬೇಕಾದರೆ ಯಾವ-ಯಾವ ಮಾನದಂಡಗಳನ್ನು ಪಾಲಿಸಲಾಗುತ್ತಿದೆ? (ಮಾಹಿತಿ ನೀಡುವುದು) | ರಾಜ್ಯದಲ್ಲಿ ಆದ್ಯತಾ ಪಡಿತರ ಚೀಟಿಗಳನ್ನು ಪಡೆಯುವ ಬಗ್ಗೆ ಈ ಕೆಳಕಂಡ (ಅನರ್ಹತೆಯನ್ನಾಧರಿಸಿ ಹೊರಗಿಡುವ) ಮಾನದಂಡಗಳನ್ನು ಜಾರಿಯಲ್ಲಿರುತ್ತವೆ. .<br>• ವೇತನವನ್ನು ಗಣನೆಗೆ ತೆಗೆದುಕೊಳ್ಳದೆ ಎಲ್ಲಾ ಖಾಯಂ ನೌಕರರು ಅಂದರೆ ಸರ್ಕಾರದ ಅಥವಾ ಸರ್ಕಾರದಿಂದ |

| | | |
|---|---|---|
| | | ಅನುದಾನವನ್ನು ಪಡೆಯುತ್ತಿರುವ ಸಂಸ್ಥೆಗಳು ಅಥವಾ ಸರ್ಕಾರಿ ಪ್ರಾಯೋಜಿತ ಸರ್ಕಾರಿ ಸ್ವಾಮ್ಯದ ಸಂಸ್ಥೆಗಳು /ಮಂಡಳಿಗಳು/ನಿಗಮಗಳು/ಸ್ವಾಯತ್ತ ಸಂಸ್ಥೆಗಳು ಇತ್ಯಾದಿ ಒಳಗೊಂಡಂತೆ ಆದಾಯ ತೆರಿಗೆ/ಸೇವಾತೆರಿಗೆ/ ಜಿಎಸ್‌ಟಿ/ವೃತ್ತಿ ತೆರಿಗೆ ಪಾವತಿಸುವ ಎಲ್ಲಾ ಕುಟುಂಬಗಳು.<br>· ಗ್ರಾಮೀಣ ಪ್ರದೇಶಗಳಲ್ಲಿ 03 ಹೆಕ್ಟರ್ ಒಣ ಭೂಮಿ ಅಥವಾ ತತ್ಸಮಾನ ನೀರಾವರಿ ಭೂಮಿ ಹೊಂದಿರುವ ಕುಟುಂಬಗಳು ಅಥವಾ ಗ್ರಾಮೀಣ ಪ್ರದೇಶವನ್ನು ಹೊರತುಪಡಿಸಿ ನಗರ ಪ್ರದೇಶಗಳಲ್ಲಿ 1000 ಚದರ ಅಡಿಗಿಂತಲೂ ಹೆಚ್ಚಿನ ವಿಸ್ತೀರ್ಣದ ಪಕ್ಕಾಮನೆಯನ್ನು ಸ್ವಂತವಾಗಿ ಹೊಂದಿರುವ ಕುಟುಂಬಗಳು.<br>· ಜೀವನೋಪಾಯಕ್ಕಾಗಿ ಸ್ವತಃ ಓಡಿಸುವ ಒಂದು ವಾಣಿಜ್ಯ ವಾಹನವನ್ನು ಅಂದರೆ ಟ್ರಾಕ್ಟರ್, ಮ್ಯಾಕ್ಸಿಕ್ಯಾಬ್, ಟ್ಯಾಕ್ಸಿ ಇತ್ಯಾದಿಗಳನ್ನು ಹೊಂದಿದ ಕುಟುಂಬವನ್ನು ಹೊರತುಪಡಿಸಿ ನಾಲ್ಕು ಚಕ್ರದ ವಾಹನಗಳನ್ನು ಹೊಂದಿರುವ ಎಲ್ಲಾ ಕುಟುಂಬಗಳು.<br>· ಕುಟುಂಬದ ವಾರ್ಷಿಕ ಆದಾಯವು ರೂ. 1.20 ಲಕ್ಷಗಳಿಗಿಂತಲೂ ಹೆಚ್ಚು ಇರುವ ಕುಟುಂಬಗಳು.<br>ಈ ಮಾನದಂಡಗಳನ್ವಯ ಅರ್ಹ ಕುಟುಂಬಗಳಿಗೆ ಪಡಿತರ ಚೀಟಿಗಳನ್ನು ವಿತರಿಸಲಾಗಿರುತ್ತದೆ. |

**ಆನಾಸ 56 ಡಿಆರ್‌ಎ 2024**

(ಕೆ.ಹೆಚ್. ಮುನಿಯಪ್ಪ)

ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ

ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ

ಇಲಾಖಾ ಸಚಿವರು